# ರಾಜಕೀಯ ಪಕ್ಷಗಳ ಸಭೆ: ದೋಷರಹಿತ ಮತದಾರರ ಪಟ್ಟಿ ಸಿದ್ಧಪಡಿಸಲು ಸಹಕರಿಸಿ

ಬೆಳಗಾವಿ, 31: ಲೋಪದೋಷ ರಹಿತ ಮತದಾರರ ಪಟ್ಟಿ ಸಿದ್ಧಪಡಿಸುವುದು ಪಾರದರ್ಶಕ ಚುನಾವಣೆ ನಡೆಸುವ ನಿಟ್ಟಿನಲ್ಲಿ ಮೊದಲ ಹೆಜ್ಜೆಯಾಗಿದೆ. ಆದ್ದರಿಂದ ಮತದಾರರ ಪಟ್ಟಿ ಪರಿಷ್ಕರಣೆ ವೇಳೆ ಅರ್ಹ ಮತದಾರರ ಸೇರ್ಪಡೆ ಹಾಗೂ ಅನರ್ಹರ ಹೆಸರು ತೆಗೆದು ಹಾಕಲು ಸಹಕರಿಸಬೇಕೆಂದು ಬೆಳಗಾವಿ ಜಿಲ್ಲೆಯ ಮತದಾರರ ಪಟ್ಟಿಯ ವೀಕ್ಷಕ, ಪ್ರಾದೇಶಿಕ ಆಯುಕ್ತ ಪಿ.ಎ. ಮೇಘಣ್ಣವರ ಮನವಿ ಮಾಡಿಕೊಂಡಿದ್ದಾರೆ.

ಜಿಲ್ಲಾಧಿಕಾರಿ ಕಚೇರಿಯ ಸಭಾಂಗಣದಲ್ಲಿ ಇಂದು ನಡೆದ ಮಾನ್ಯತೆ ಪಡೆದ ರಾಜಕೀಯ ಪಕ್ಷಗಳ ಪ್ರತಿನಿಧಿಗಳ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮುಂಬರುವ ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಲೋಪದೋಷ ರಹಿತ ಮತದಾರರ ಪಟ್ಟಿಯನ್ನು ಸಿದ್ಧಪಡಿಸುವ ಪ್ರಕ್ರಿಯೆ ಈಗಾಗಲೇ ಆರಂಭಗೊಂಡಿದ್ದು, ಪಟ್ಟಿ ಪರಿಷ್ಕರಣೆಗೆ ಕಾಲಾವಕಾಶ ನಿಗದಿ ಪಡಿಸಲಾಗಿದೆ. ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಹಾಗೂ ಸಾರ್ವಜನಿಕರು ನಿಗದಿತ ಅವಧಿಯಲ್ಲಿ ಸಲಹೆ-ಸೂಚನೆಗಳನ್ನು ನೀಡುವ ಮೂಲಕ ಮತದಾರರ ಪಟ್ಟಿ ಪರಿಷ್ಕರಣೆಗೆ ಸಹಕರಿಸಬೇಕು ಎಂದು ಹೇಳಿದರು.

**ಬಿಎಲ್‌ಎ ನೇಮಿಸಲು ಸಲಹೆ:**

ದೋಷರಹಿತ ಮತದಾರರ ಅಂತಿಮ ಪಟ್ಟಿ ಸಿದ್ಧಪಡಿಸಲು, ಚುನಾವಣೆ ಸಂದರ್ಭದಲ್ಲಿ ಉಂಟಾಗುವ ಗೊಂದಲಗಳನ್ನು ತಡೆಗಟ್ಟಲು ಅನುಕೂಲವಾಗುವಂತೆ ಎಲ್ಲ ರಾಜಕೀಯ ಪಕ್ಷಗಳು ಬೂತ್ ಮಟ್ಟದ ಏಜೆಂಟ್‌ರನ್ನು ನೇಮಿಸಬೇಕೆಂದು ಪಿ.ಎ. ಮೇಘಣ್ಣವರ ತಿಳಿಸಿದರು.

ಯಾವುದೇ ಅರ್ಹ ಮತದಾರ ಪಟ್ಟಿಯಿಂದ ಹೊರಗುಳಿಯಬಾರದು. ಅದೇ ರೀತಿ ಅನರ್ಹ ವ್ಯಕ್ತಿಗಳು (ನಿಧನ, ಸ್ಥಳಾಂತರ, ಎರಡು ಕಡೆ ಸೇರ್ಪಡೆ) ಪಟ್ಟಿಯಲ್ಲಿ ಇರಬಾರದು ಎಂಬುದು ಚುನಾವಣಾ ಆಯೋಗದ ಆಶಯವಾಗಿದೆ. ಆದ್ದರಿಂದ ಪಟ್ಟಿ ಪರಿಷ್ಕರಣೆ ಸಂದರ್ಭದಲ್ಲಿ ಹಕ್ಕು ಆಕ್ಷೇಪಣೆ ಸಲ್ಲಿಕೆಗೆ ಅಕ್ಟೋಬರ್ 20 ರಿಂದ ನವೆಂಬರ್ 20ರ ವರೆಗೆ ಕಾಲಾವಕಾಶವಿದ್ದು, ಈ ಅವಕಾಶವನ್ನು ರಾಜಕೀಯ ಪಕ್ಷಗಳು ಬಳಸಿಕೊಳ್ಳಬೇಕೆಂದು ತಿಳಿಸಿದರು.



ಭಾವಚಿತ್ರ ಹೊಂದಿದ ಮತದಾರರ ಅಂತಿಮ ಪಟ್ಟಿಯನ್ನು ಜನವರಿ 4, 2019 ರಂದು ಪ್ರಚುರ ಪಡಿಸಲಾಗುತ್ತದೆ.

ಮತದಾರರ ಪಟ್ಟಿ ಪರಿಷ್ಕರಣೆ ಸೇರಿದಂತೆ ಯಾವುದೇ ಸಮಸ್ಯೆಗಳು ಎದುರಾದರೆ ರಾಜಕೀಯ ಪಕ್ಷಗಳ ಪ್ರತಿನಿಧಿಗಳು, ಸಾರ್ವಜನಿಕರು ನೇರವಾಗಿ ತಮ್ಮ ಗಮನಕ್ಕೆ (ಕಚೇರಿ ದೂರವಾಣಿ ಸಂಖ್ಯೆ 0831-2463730) ತರಬೇಕು ಎಂದು ಮೇಘಣ್ಣವರ ತಿಳಿಸಿದರು.

**ಮಹಿಳಾ, ಯುವ ಮತದಾರರ ಸೇರ್ಪಡೆ ಅಗತ್ಯ:**

ಈಗಾಗಲೇ ಪ್ರಚುರ ಪಡಿಸುವ ಕರಡು ಮತದಾರರ ಪಟ್ಟಿ ಪರಿಶೀಲಿಸಿದಾಗ ಮಹಿಳಾ, ಯುವ ಮತದಾರರ ನೋಂದಣಿ ಪ್ರಮಾಣ ಕಡಿಮೆಯಾಗಿರುವುದು ಕಂಡು ಬಂದಿರುತ್ತದೆ. ಆದ್ದರಿಂದ ಒಟ್ಟು ಮತದಾರರ ಪ್ರಮಾಣಕ್ಕೆ ತಕ್ಕಂತೆ ಮಹಿಳಾ ಮತ್ತು ಯುವ ಮತದಾರರ ಸೇರ್ಪಡೆಗೆ ರಾಜಕೀಯ ಪಕ್ಷಗಳೂ ಸಹಕರಿಸಬೇಕೆಂದು ಜಿಲ್ಲಾಧಿಕಾರಿ ಡಾ. ಎಸ್.ಬಿ. ಬೊಮ್ಮನಹಳ್ಳಿ ಹೇಳಿದರು.

ನವೆಂಬರ್ 20ರ ವರೆಗೆ ಅವಕಾಶವಿದ್ದು, ಕೊನೆ ಗಳಿಗೆಯಲ್ಲಿ ಹಕ್ಕು ಮತ್ತು ಆಕ್ಷೇಪಣೆ ಸಲ್ಲಿಸುವ ಬದಲು ನಿಗದಿತ ಕಾಲಮಿತಿಯಲ್ಲಿ ಅರ್ಜಿ ಸಲ್ಲಿಸಬೇಕು ಎಂದರು.

ಈ ಸಂದರ್ಭದಲ್ಲಿ ಮಾತನಾಡಿದ ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳು, ಯುವ ಮತದಾರರ ನೋಂದಣಿಗಾಗಿ ಕಾಲೇಜುಗಳಲ್ಲಿ ವಿಶೇಷ ಅಭಿಯಾನ ಹಮ್ಮಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಅರ್ಹ ಮತದಾರರ ಸೇರ್ಪಡೆಗೆ ಸಹಕರಿಸಲು ಬೂತ್ ಮಟ್ಟದ ಏಜೆಂಟ್‌ರನ್ನು ನೇಮಕ ಮಾಡಲಾಗುವುದು ಎಂದು ತಿಳಿಸಿದರು.

ಜಿಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಮಚಂದ್ರನ್, ಪಾಲಿಕೆ ಆಯುಕ್ತ ಶಶಿಧರ್ ಕುರೇರ್ ಉಪಸ್ಥಿತರಿದ್ದರು.

Scanned by CamScanner

# ಮತದಾರರ ಪಟ್ಟಿ ಪರಿಷ್ಕರಣೆ: ನಿಖರ ಮಾಹಿತಿ ಸಲ್ಲಿಸಲು ಸೂಚನೆ



ಬೆಳಗಾವಿ, 31: ಮತದಾರರ ಪಟ್ಟಿ ಪರಿಷ್ಕರಣೆ ಮಾಡುವ ಸಂದರ್ಭದಲ್ಲಿ ದುರ್ಬಲ ವರ್ಗಗಳ ಜನರು ವಾಸಿಸುವ ಪ್ರದೇಶಗಳಲ್ಲಿ ಮತದಾರರ ನೋಂದಣಿಗೆ ತೆಗೆದುಕೊಂಡ ಕ್ರಮಗಳ ಕುರಿತು ಅಗತ್ಯ ದಾಖಲೆಗಳ ಸಮೇತ ನಿಖರ ಮಾಹಿತಿ ಒದಗಿಸಬೇಕೆಂದು ಬೆಳಗಾವಿ ಜಿಲ್ಲೆಯ ಮತದಾರರ ಪಟ್ಟಿಯ ವೀಕ್ಷಕರು ಹಾಗೂ ಪ್ರಾದೇಶಿಕ ಆಯುಕ್ತ ಪಿ.ಎ. ಮೇಘಣ್ಣವರ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಜಿಲ್ಲಾಧಿಕಾರಿ ಕಚೇರಿಯ ಸಭಾಂಗಣದಲ್ಲಿ ಇಂದು ನಡೆದ ಮತದಾರರ ಪಟ್ಟಿಗಳ ವಿಶೇಷ ಸಂಕ್ಷಿಪ್ತ ಪರಿಷ್ಕರಣೆ ಕುರಿತ ಅಧಿಕಾರಿಗಳ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

, ಬೂತ್ ಮಟ್ಟದ ಅಧಿಕಾರಿಗಳು ಮತದಾರರ ನೋಂದಣಿಗೆ ತೆಗೆದುಕೊಂಡ ಕ್ರಮಗಳನ್ನು ಪ್ರತಿ ವಿಧಾನಸಭಾ ಕ್ಷೇತ್ರವಾರು ಖುದ್ದಾಗಿ ಭೇಟಿ ನೀಡಿ ಪರಿಶೀಲಿಸುತ್ತೇನೆ. ತಪ್ಪು ಮಾಹಿತಿ ನೀಡಿದರೆ ಅಂತಹ ಅಧಿಕಾರಿಗಳ ವಿರುದ್ಧ ಚುನಾವಣಾ ಆಯೋಗಕ್ಕೆ ವರದಿ ಸಲ್ಲಿಸಲಾಗುವುದು ಎಂದು ತಿಳಿಸಿದರು.

ಪ್ರತಿ ವಿಧಾನಸಭಾ ಕ್ಷೇತ್ರದಲ್ಲಿ ಸ್ಥಾಪಿಸಲಾಗುವ ಸಹಾಯವಾಣಿ ಕೇಂದ್ರದಲ್ಲಿ ಸಮಗ್ರ ಮಾಹಿತಿ ನೀಡಬಲ್ಲ ನುರಿತ ಸಿಬ್ಬಂದಿ ನಿಯೋಜಿಸಬೇಕು. ಸಾರ್ವಜನಿಕರು ಮಾಹಿತಿ ಕೇಳಿದಾಗ ಮತದಾರರ ನೋಂದಣಿಗೆ ಸಂಬಂಧಿಸಿದಂತೆ ಸಮರ್ಪಕ ಮಾಹಿತಿ ನೀಡಬೇಕು. ಕಾಟಾಚಾರಕ್ಕೆ ಸಹಾಯವಾಣಿ ಕೇಂದ್ರ ಇರಬಾರದು. ಸ್ವೀಕರಿಸಲಾಗುವ ದೂರುಗಳು ಮತ್ತು ಕರೆಗಳ ಬಗ್ಗೆ ರಿಜಿಸ್ಟರ್ ಕಡ್ಡಾಯವಾಗಿ ನಿರ್ವಹಿಸಬೇಕು ಎಂದು ಮೇಘಣ್ಣವರ ಸೂಚನೆ ನೀಡಿದ್ದರು.

ಸಭೆಯಿಂದಲೇ ಬೇರೆ ಬೇರೆ ಕ್ಷೇತ್ರದ ಸಹಾಯವಾಣಿ ಕೇಂದ್ರಗಳಿಗೆ ಕರೆ ಮಾಡಿ ಪರಿಶೀಲಿಸಿದ ಅವರು, ನುರಿತ ಸಿಬ್ಬಂದಿ ನಿಯೋಜಿಸಿದರೆ ಮಾತ್ರ ಇದು ಜನರಿಗೆ ಸಹಕಾರಿಯಾಗಲಿದೆ. ಮತದಾರರ ಪಟ್ಟಿ ಪರಿಷ್ಕರಣೆಯನ್ನು ಚುನಾವಣಾ ಆಯೋಗದ ನಿಯಮಾವಳಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕೆಂದು ಅವರು ತಿಳಿಸಿದರು.

ಯುವ ಮತದಾರರ ನೋಂದಣಿ ಪ್ರಮಾಣ ಕಡಿಮೆ ಇರುವ ಕಡೆಗಳಲ್ಲಿ ಮತದಾರರ ಜಾಗೃತಿಗೆ ಸ್ವೀಪ್ ಚಟುವಟಿಕೆಗಳನ್ನು ನಿರಂತರವಾಗಿ, ಪರಿಣಾಮಕಾರಿಯಾಗಿ ಹಮ್ಮಿಕೊಳ್ಳಬೇಕು. ತೀವ್ರ ಅಗತ್ಯ ಇರುವ ಕಡೆಗಳಲ್ಲಿ ವಿಶೇಷ ಅಭಿಯಾನ ಕೈಗೊಳ್ಳಬೇಕು ಎಂದು ಮೇಘಣ್ಣವರ ನಿರ್ದೇಶನ ನೀಡಿದರು.

**ಸಂಕ್ಷಿಪ್ತ ತರಬೇತಿಗೆ ಸೂಚನೆ:**

ಮತದಾರರ ಪಟ್ಟಿ ಪರಿಷ್ಕರಣೆಗೆ ಸಂಬಂಧಿಸಿದಂತೆ ವಿಧಾನಸಭಾ ಕ್ಷೇತ್ರವಾರು ಬೂತ್ ಮಟ್ಟದ ಅಧಿಕಾರಿಗಳ ಸಭೆ ನಡೆಸಿ, ಸಂಕ್ಷಿಪ್ತ ತರಬೇತಿ ನೀಡಿದರೆ ಪರಿಷ್ಕರಣೆ ಕೆಲಸ ಪರಿಣಾಮಕಾರಿ ಆಗುತ್ತದೆ. ಸಹಾಯಕ ಚುನಾವಣಾಧಿಕಾರಿಗಳು ಈ ನಿಟ್ಟಿನಲ್ಲಿ ಕ್ರಮ ವಹಿಸಬೇಕೆಂದು ಜಿಲ್ಲಾಧಿಕಾರಿ ಡಾ. ಎಸ್.ಬಿ. ಬೊಮ್ಮನಹಳ್ಳಿ ಸೂಚನೆ ನೀಡಿದರು.

ಮತದಾರರ ಪಟ್ಟಿ ಪರಿಷ್ಕರಣೆಗೆ ಸಂಬಂಧಿಸಿದ ಮಾಹಿತಿ ನೀಡಲು ಹಾಗೂ ಸಾರ್ವಜನಿಕ ದೂರುಗಳನ್ನು ಸ್ವೀಕರಿಸಲು ವಿಶೇಷ ಸಹಾಯವಾಣಿ ಕೇಂದ್ರವನ್ನು ಕಡ್ಡಾಯವಾಗಿ ಆರಂಭಿಸಬೇಕು. ಅದೇ ರೀತಿ ಎಸ್‌ಎಂಎಸ್ ಮೂಲಕವೂ ಅಹವಾಲು ಸ್ವೀಕರಿಸಲು ಪ್ರತ್ಯೇಕ ಮೊಬೈಲ್ ಸಂಖ್ಯೆ ಒದಗಿಸಬೇಕೆಂದು ಸಹಾಯಕ ಚುನಾವಣಾ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸಭೆಯಲ್ಲಿ ವಿಧಾನಸಭಾ ಕ್ಷೇತ್ರವಾರು ಲಿಂಗಾನುಪಾತ, ಪುರುಷ ಮತ್ತು ಮಹಿಳಾ ಮತದಾರರ ಅನುಪಾತ, ನಗರ ಪ್ರದೇಶದಲ್ಲಿ 1400, 1300 ಕ್ಕಿಂತ ಹೆಚ್ಚಿಗೆ ಮತದಾರರು ಇರುವ ಭಾಗಗಳಲ್ಲಿ ಅನರ್ಹ ಮತದಾರರನ್ನು ಪಟ್ಟಿಯಿಂದ ತೆಗೆದು ಹಾಕಲು ತೆಗೆದುಕೊಂಡ ಕ್ರಮಗಳು, ಬೂತ್ ಮಟ್ಟದ ಅಧಿಕಾರಿಗಳ ನೇಮಕ, ಮನೆ ಮನೆ ಭೇಟಿ ನೀಡಿ ಮತದಾರರ ಪಟ್ಟಿ ಪರಿಶೀಲನೆ, ಹೊಸದಾಗಿ ಮತದಾರರ ನೋಂದಣಿಗೆ ತೆಗೆದುಕೊಂಡ ಕ್ರಮಗಳು ಸೇರಿದಂತೆ ವಿವಿಧ ವಿಷಯಗಳ ಬಗ್ಗೆ ಮತದಾರರ ಪಟ್ಟಿಯ ವೀಕ್ಷಕ ಮೇಘಣ್ಣವರ ಪರಿಶೀಲಿಸಿದರು.

ಜಿಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಮಚಂದ್ರನ್, ಅಪರ ಜಿಲ್ಲಾಧಿಕಾರಿ ಡಾ. ಬೂದೆಪ್ಪ ಹೆಚ್.ಬಿ., ಪಾಲಿಕೆ ಆಯುಕ್ತ ಶಶಿಧರ್ ಕುರೇರ್ ಉಪಸ್ಥಿತರಿದ್ದರು.

ಜಿಲ್ಲೆಯ ಮತದಾರರ ನೋಂದಣಿ ಅಧಿಕಾರಿಗಳು, ಸಹಾಯಕ ಮತದಾರರ ನೋಂದಣಿ ಅಧಿಕಾರಿಗಳು ಸಭೆಯಲ್ಲಿ ಪಾಲ್ಗೊಂಡಿದ್ದರು.

Scanned by CamScanner

# ಮತದಾರರ ತಪ್ಪು ಮಾಹಿತಿ ನೀಡಿದರೆ ಕ್ರಮ

**ವಿಕ ಸುದ್ದಿಲೋಕ** ಬೆಳಗಾವಿ

ದುರ್ಬಲ ವರ್ಗಗಳ ಜನ ವಾಸಿಸುವ ಪ್ರದೇಶಗಳಲ್ಲಿ ಮತದಾರರ ನೋಂದಣಿಗೆ ತೆಗೆದುಕೊಂಡ ಕ್ರಮಗಳ ಕುರಿತು ಅಗತ್ಯ ದಾಖಲೆಗಳ ಸಮೇತ ನಿಖರ ಮಾಹಿತಿ ಒದಗಿಸಬೇಕು ಎಂದು ಜಿಲ್ಲೆಯ ಮತದಾರರ ಪಟ್ಟಿಯ ವೀಕ್ಷಕರು ಹಾಗೂ ಪ್ರಾದೇಶಿಕ ಆಯುಕ್ತ ಪಿ.ಎ. ಮೇಘಣ್ಣವರ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಬುಧವಾರ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಮತದಾರರ ಪಟ್ಟಿಗಳ ವಿಶೇಷ ಪರಿಷ್ಕರಣೆ ಕುರಿತು ಅಧಿಕಾರಿಗಳೊಂದಿಗೆ ಏರ್ಪಡಿಸಿದ್ದ ಸಭೆಯಲ್ಲಿ ಅವರು ಮಾತನಾಡಿದರು. ಬೂತ್ ಮಟ್ಟದ ಅಧಿಕಾರಿಗಳು ಮತದಾರರ ನೋಂದಣಿಗೆ ತೆಗೆದುಕೊಂಡ ಕ್ರಮಗಳನ್ನು ಪ್ರತಿ ವಿಧಾನಸಭಾ ಕ್ಷೇತ್ರವಾರು ಖುದ್ದಾಗಿ ಭೇಟಿ ನೀಡಿ ಪರಿಶೀಲಿಸುತ್ತೇನೆ. ತಪ್ಪು ಮಾಹಿತಿ ನೀಡಿದರೆ ಅಂತಹ ಅಧಿಕಾರಿಗಳ ವಿರುದ್ಧ ಚುನಾವಣಾ ಆಯೋಗಕ್ಕೆ ವರದಿ ಸಲ್ಲಿಸಲಾಗುವುದು ಎಂದು ಎಚ್ಚರಿಸಿದರು.

ಪ್ರತಿ ವಿಧಾನಸಭಾ ಕ್ಷೇತ್ರದಲ್ಲಿ ಸ್ಥಾಪಿಸಲಾಗುವ ಸಹಾಯವಾಣಿ ಕೇಂದ್ರದಲ್ಲಿ ಸಮಗ್ರ ಮಾಹಿತಿ ನೀಡಬಲ್ಲ ನುರಿತ ಸಿಬ್ಬಂದಿಯನ್ನು ನಿಯೋಜಿಸಬೇಕು. ಮತದಾರರ ನೋಂದಣಿಗೆ ಸಂಬಂಧಿಸಿದಂತೆ ಸಾರ್ವಜನಿಕರು ಮಾಹಿತಿ ಕೇಳಿದಾಗ ಸಮರ್ಪಕ ಮಾಹಿತಿ ನೀಡಬೇಕು. ಕಾಟಾಚಾರಕ್ಕೆ ಸಹಾಯವಾಣಿ ಕೇಂದ್ರ ಇರಬಾರದು. ಸ್ವೀಕರಿಸಲಾಗುವ ದೂರುಗಳು ಮತ್ತು ಕರೆಗಳ ಬಗ್ಗೆ ಕಡ್ಡಾಯವಾಗಿ ರಿಜಿಸ್ಟರ್ ನಿರ್ವಹಿಸಬೇಕು ಎಂದು ಅವರು ಸೂಚಿಸಿದರು. ಸಭೆ ವೇಳೆ ಬೇರೆ ಕ್ಷೇತ್ರದ ಸಹಾಯವಾಣಿ ಕೇಂದ್ರಗಳಿಗೆ ಕರೆ ಮಾಡಿ ಪರಿಶೀಲಿಸಿದರು. ಯುವ ಮತದಾರರ ನೋಂದಣಿ ಪ್ರಮಾಣ ಕಡಿಮೆ ಇರುವ ಕಡೆಗಳಲ್ಲಿ ಮತದಾರರ ಜಾಗೃತಿಗೆ ಸ್ವೀಪ್ ಚಟುವಟಿಕೆಗಳನ್ನು ಪರಿಣಾಮಕಾರಿಯಾಗಿ ಹಮ್ಮಿಕೊಳ್ಳಬೇಕು. ತೀವ್ರ ಅಗತ್ಯ ಇರುವ ಕಡೆಗಳಲ್ಲಿ ವಿಶೇಷ ಅಭಿಯಾನ ಕೈಗೊಳ್ಳಬೇಕು ಎಂದು ಮೇಘಣ್ಣವರ ನಿರ್ದೇಶನ ನೀಡಿದರು.



ಲೋಪದೋಷ ರಹಿತ ಮತದಾರರ ಪಟ್ಟಿ ಸಿದ್ಧಪಡಿಸುವ ವಿಷಯವಾಗಿ ಆಯೋಜಿಸಿದ್ದ ಸಭೆಯಲ್ಲಿ ಮಾತನಾಡುತ್ತಿರುವ ಪ್ರಾದೇಶಿಕ ಆಯುಕ್ತ ಪಿ.ಎ.ಮೇಘಣ್ಣವರ.

**ಸಂಕ್ಷಿಪ್ತ ತರಬೇತಿಗೆ ಸೂಚನೆ:** ಇದೇ ವೇಳೆ ಮತದಾರರ ಪಟ್ಟಿ ಪರಿಷ್ಕರಣೆಗೆ ಸಂಬಂಧಿಸಿದಂತೆ ವಿಧಾನಸಭಾ ಕ್ಷೇತ್ರವಾರು ಬೂತ್ ಮಟ್ಟದ ಅಧಿಕಾರಿಗಳ ಸಭೆ ನಡೆಸಿದ ಜಿಲ್ಲಾಧಿಕಾರಿ ಡಾ.ಎಸ್.ಬಿ.ಬೊಮ್ಮನಹಳ್ಳಿ, ಸಂಕ್ಷಿಪ್ತ ತರಬೇತಿ ನೀಡಿದರೆ ಪರಿಷ್ಕರಣೆ ಪರಿಣಾಮಕಾರಿಯಾಗುತ್ತದೆ. ಸಹಾಯಕ ಚುನಾವಣಾಧಿಕಾರಿಗಳು ಈ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಬೇಕು. ಮತದಾರರ ಪಟ್ಟಿ ಪರಿಷ್ಕರಣೆಗೆ ಸಂಬಂಧಿಸಿದ ಮಾಹಿತಿ ನೀಡಲು ಹಾಗೂ ಸಾರ್ವಜನಿಕ ದೂರುಗಳನ್ನು ಸ್ವೀಕರಿಸಲು ವಿಶೇಷ ಸಹಾಯವಾಣಿ ಕೇಂದ್ರವನ್ನು ಕಡ್ಡಾಯವಾಗಿ ಆರಂಭಿಸಬೇಕು. ಅದೇ ರೀತಿ ಎಸ್‌ಎಂಎಸ್ ಮೂಲಕವೂ ಅಹವಾಲು ಸ್ವೀಕರಿಸಲು ಪ್ರತ್ಯೇಕ ಮೊಬೈಲ್ ಸಂಖ್ಯೆ ಒದಗಿಸಬೇಕು ಎಂದು ಸೂಚಿಸಿದರು. ಜಿಪಂ ಸಿಇಒ ಆರ್. ರಾಮಚಂದ್ರನ್, ಅಪರ ಜಿಲ್ಲಾಧಿಕಾರಿ ಡಾ.ಎಚ್.ಬಿ. ಬೂದೆಪ್ಪ, ಮಹಾನಗರ ಪಾಲಿಕೆ ಆಯುಕ್ತ ಶಶಿಧರ ಕುರೇರ ಮತ್ತಿತರರು ಉಪಸ್ಥಿತರಿದ್ದರು. ಜಿಲ್ಲೆಯ ಮತದಾರರ ನೋಂದಣಿ ಅಧಿಕಾರಿಗಳು, ಸಹಾಯಕ ಮತದಾರರ ನೋಂದಣಿ ಅಧಿಕಾರಿಗಳು ಸಭೆಯಲ್ಲಿ ಪಾಲ್ಗೊಂಡಿದ್ದರು.

Scanned by CamScanner